**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆಯ ನಡವಳಿಗಳು**

ವಿಷಯ: ನ್ಯಾಕ್ ಪ್ರಕ್ರಿಯೆಗೆ ಒಳಪಡುತ್ತಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಅನುದಾನ ಬಿಡುಗಡೆ ಆದೇಶ ಸಂಖ್ಯೆ ಇಡಿ/115/ಹೆಚ್‌ಪಿಸಿ/2020, ಬೆಂಗಳೂರು ದಿನಾಂಕ: 12-08-2020
2. ನೋಡಲ್ ಅಧಿಕಾರಿಗಳು, ರಾಜ್ಯ ಗುಣಮಟ್ಟ ಭರವಸಾ ಕೋಶ ಇವರ ಸಲ್ಲಿಕೆ ದಿನಾಂಕ: 16.09.2020.

**********

**ಪ್ರಸ್ತಾವನೆ:**

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ನ್ಯಾಕ್ ಮೌಲ್ಯಮಾಪನ/ ಮರುಮೌಲ್ಯಮಾಪನಕ್ಕೆ ಒಳಪಡುವುದು ಅವಶ್ಯವಿರುವ ಹಿನ್ನೆಲೆಯಲ್ಲಿ ಮಾನ್ಯತೆಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನವನ್ನು ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ ಇಲಾಖೆಗೆ 2020-21 ರ ಸಾಲಿನಲ್ಲಿ **"ರಾಷ್ಟ್ರೀಯ ಅಂಗೀಕೃತ ಪರಿಷತ್ತು"** ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ 2202-03-112-0-09-059 ರಲ್ಲಿ ಒದಗಿಸಲಾಗಿರುತ್ತದೆ. ಸದರಿ ಅನುದಾನದ ಮಿತಿಯೊಳಗೆ ಈ ಕೆಳಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಎಸ್.ಎಸ್.ಆರ್. ಶುಲ್ಕ, ಮೌಲ್ಯಮಾಪನ ಶುಲ್ಕ ಮತ್ತು ಪೀರ್ ತಂಡದ ಭೇಟಿ ವೆಚ್ಚಕ್ಕಾಗಿ ಅನುದಾನ ಬಿಡುಗಡೆ ಮಾಡಲು ಈ ಆದೇಶ.

**ಆದೇಶ ಸಂಖ್ಯೆ:ಕಾಶಿಇ/20/ ನ್ಯಾಕ್.ಅನುದಾನ/2020-21, ಬೆಂಗಳೂರು ದಿ: ~~.09.2020.~~ 12/10/2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ನ್ಯಾಕ್ ಮೌಲ್ಯಮಾಪನ ಪ್ರಕ್ರಿಯೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಎಸ್.ಎಸ್.ಆರ್. ಶುಲ್ಕ, ಮೌಲ್ಯಮಾಪನ ಶುಲ್ಕ ಮತ್ತು ಪೀರ್ ತಂಡದ ಭೇಟಿ ವೆಚ್ಚ ಭರಿಸಲು **"ರಾಷ್ಟ್ರೀಯ ಅಂಗೀಕೃತ ಪರಿಷತ್ತು"** ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ **2202-03-112-0-09-059** ರಡಿಯಲ್ಲಿ ಒದಗಿಸಿರುವ ರೂ. **50.00** ಲಕ್ಷದ **(ರೂಪಾಯಿ ಐವತ್ತು ಲಕ್ಷ ಮಾತ್ರ)** ಅನುದಾನದ ಮಿತಿಯೊಳಗೆ ರೂ. 5,47,000.00 ಗಳ ಅನುದಾನವನ್ನು ಈ ಕಛೇರಿ ಸಮಸಂಖ್ಯೆ ದಿನಾಂಕ: 28.08.2020 ರಲ್ಲಿ ಬಿಡುಗಡೆ ಮಾಡಲಾಗಿತ್ತು. ಉಳಿಕೆ **ರೂ.44,53,000/-** ರ ಅನುದಾನದ ಮಿತಿಯೊಳಗೆ ಕೆಳಕಂಡ 10 ಕಾಲೇಜುಗಳಿಗೆ ಕೆಲವು ಷರತ್ತುಗಳಿಗೊಳಪಟ್ಟು ಸದರಿ ಅನುದಾನವನ್ನು ಕೆಳಕಂಡ ಕಾಲೇಜಿನ ಪ್ರಾಂಶುಪಾಲರಿಗೆ ನಿಯಮಾನುಸಾರ ಬಳಸಿಕೊಳ್ಳಲು ಅನುಮತಿ ನೀಡಲಾಗಿದೆ.

(ರೂ.ಗಳಲ್ಲಿ)

**ನ್ಯಾಕ್ ಮೌಲ್ಯಮಾಪನ ಪ್ರಕ್ರಿಯೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು**

| ಕ್ರ. ಸಂ | ಕಾಲೇಜಿನ ಹೆಸರು | ಕೆ-2 ಡಿಡಿಓ ಸಂಖ್ಯೆ | ಎಸ್.ಎಸ್.ಆರ್. ಶುಲ್ಕ (ರೂ.ಗಳಲ್ಲಿ) | ಪೀರ್ ತಂಡದ ಭೇಟಿ ವೆಚ್ಚ (ರೂ.ಗಳಲ್ಲಿ) | ಪೀರ್ ತಂಡದ ಭೇಟಿ ಪ್ರಯುಕ್ತ ವಾಹನ ಬಾಡಿಗೆ, ಶಿಷ್ಟಾಚಾರ, ಚಿತ್ರೀಕರಣ ಇತ್ಯಾದಿಗಳಿಗೆ (ರೂ.ಗಳಲ್ಲಿ) | ಒಟ್ಟು ಮೊತ್ತ (ರೂ.ಗಳಲ್ಲಿ) |
|---|---|---|---|---|---|---|
| 1 | 2 | 3 | 4 | 5 | 6 | 7 |
| 1 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿತ್ತಾಪುರ - 585 211 | 183290 | 218300.00 | 177000.00 | 50000.00 | **445300.00** |
| 2 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗುರುಮಿಟ್‌ಕಲ್ | 183310 | 218300.00 | 177000.00 | 50000.00 | **445300.00** |
| | **ಒಟ್ಟು ಮೊತ್ತ** | - | **436600.00** | **354000.00** | **100000.00** | **890600.00** |

| ಕ್ರ. ಸಂ | ಕಾಲೇಜಿನ ಹೆಸರು | ಕೆ-2 ಡಿಡಿಓ ಸಂಖ್ಯೆ | ಎಸ್.ಎಸ್.ಆರ್. ಶುಲ್ಕ (ರೂ.ಗಳಲ್ಲಿ) | ಪೀರ್ ತಂಡದ ಭೇಟಿ ವೆಚ್ಚ (ರೂ.ಗಳಲ್ಲಿ) | ಪೀರ್ ತಂಡದ ಭೇಟಿ ಪ್ರಯುಕ್ತ ವಾಹನ ಬಾಡಿಗೆ, ಶಿಷ್ಟಾಚಾರ, ಚಿತ್ರೀಕರಣ ಇತ್ಯಾದಿಗಳಿಗೆ (ರೂ.ಗಳಲ್ಲಿ) | ಒಟ್ಟು ಮೊತ್ತ (ರೂ.ಗಳಲ್ಲಿ) |
|---|---|---|---|---|---|---|
| 1 | 2 | 3 | 4 | 5 | 6 | 7 |
| | ಹಿಂದಿನ ಪುಟದಿಂದ ಮುಂದುವರೆದು (b/f) | - | 436600.00 | 354000.00 | 100000.00 | 890600.00 |
| 3 | ಶ್ರೀಮತಿ ಮತ್ತು ಶ್ರೀ ವೈ.ಇ ರಂಗಯ್ಯಶೆಟ್ಟಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾವಗಡ - 561 202 | 183550 | 218300.00 | 177000.00 | 50000.00 | **445300.00** |
| 4 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೆಳ್ಳಾರೆ-574212 | 180790 | 218300.00 | 177000.00 | 50000.00 | **445300.00** |
| 5 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಟ್ಲ-574 243 | 183750 | 218300.00 | 177000.00 | 50000.00 | **445300.00** |
| 6 | ಶ್ರೀ ಮಹದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಳ್ಳೇಗಾಲ-571440 | 181890 | 218300.00 | 177000.00 | 50000.00 | **445300.00** |
| 7 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆಬ್ರಿ, ಕಾರ್ಕಳ ತಾ:-576112 | 183770 | 218300.00 | 177000.00 | 50000.00 | **445300.00** |
| 8 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಉಪ್ಪಿನಂಗಡಿ - 574 241 | 182640 | 218300.00 | 177000.00 | 50000.00 | **445300.00** |
| 9 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚನ್ನಪಟ್ಟಣ-571 501 | 181380 | 218300.00 | 177000.00 | 50000.00 | **445300.00** |
| 10 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೂಲಿಬೆಲೆ. | 181450 | 218300.00 | 177000.00 | 50000.00 | **445300.00** |
| | **ಒಟ್ಟು ಮೊತ್ತ** | - | **2183000.00** | **1770000.00** | **500000.00** | **4453000.00** |

ರೂಪಾಯಿ ನಲವತ್ತನಾಲ್ಕು ಲಕ್ಷದ ಐವತ್ತಮೂರು ಸಾವಿರ ಮಾತ್ರ

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಷರತ್ತುಗಳು:-

1. ಖರೀದಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧ್ಯಾದೇಶ 2000ರ (ಕೆ.ಟಿ.ಪಿ.ಪಿ) ಮತ್ತು ಅದರಡಿಯಲ್ಲಿ ನಿಯಮಗಳನ್ನು ಚಾಚು ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
2. ಈ ವೆಚ್ಚವನ್ನು ಮಾರ್ಚ್ 2021 ಮಾಹೆಯೊಳಗೆ ಎಲ್ಲಾ ಪ್ರಚಲಿತ ನಿಯಮಗಳನ್ನು ಪಾಲಿಸಿ ಭರಿಸುವುದು.
3. ಈ ಅನುದಾನವನ್ನು ನ್ಯಾಕ್ ಮೌಲ್ಯಮಾಪನ / ಮರುಮೌಲ್ಯಮಾಪನ ಪ್ರಕ್ರಿಯೆಗಳಿಗೆ ಮಾತ್ರ ಬಳಸತಕ್ಕದ್ದು.
4. ಬಿಡುಗಡೆ ಮಾಡಲಾದ ಅನುದಾನದ ಖರ್ಚು-ವೆಚ್ಚಗಳನ್ನು ಲೆಕ್ಕ ತಪಾಸಣೆಗೆ ಒಳಪಡಿಸತಕ್ಕದ್ದು.

5. ಬಿಡುಗಡೆ ಮಾಡಲಾದ ಅನುದಾನದ ಬಳಕೆಯ ಬಗ್ಗೆ ಕರ್ನಾಟಕ ಆರ್ಥಿಕ ಸಂಹಿತೆ, ನಿಯಮ 161 ರನ್ವಯ ನಿಗಧಿತ ನಮೂನೆಯಲ್ಲಿಯೇ "ಹಣ ಬಳಕೆಯ ಪ್ರಮಾಣ ಪತ್ರ" ಗಳನ್ನು ಸಿದ್ಧಪಡಿಸಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಮೇಲು ಸಹಿಯೊಂದಿಗೆ ಕಡ್ಡಾಯವಾಗಿ 2021ರ ಏಪ್ರಿಲ್ ಮಾಹೆಯ ಅಂತ್ಯದೊಳಗೆ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿ, ಬಿಡುಗಡೆಯಾದ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳುವಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಹಾಗೂ ಈ ಷರತ್ತುಗಳು ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

<u>ಇವರಿಗೆ:</u>

1. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಕಲಬುರ್ಗಿ ಮತ್ತು ಧಾರವಾಡ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಲೆಕ್ಕಾಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5. ನೋಡಲ್ ಅಧಿಕಾರಿಗಳು-ರಾಜ್ಯ ಗುಣಮಟ್ಟ ಭರವಸಾ ಕೋಶ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
6. ಮ್ಯಾನೇಜರ್/ಅಧೀಕ್ಷಕರು, ಯೋಜನಾ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು..
7. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಈ ಆದೇಶವನ್ನು ಇಲಾಖೆಯ ವೆಬ್-ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
8. ಕಛೇರಿ ಪ್ರತಿ.